**ಕರ್ನಾಟಕ ವಿಧಾನ ಪರಿಷತ್**

| | |
|---|---|
| ಸದಸ್ಯರ ಹೆಸರು | ಶ್ರೀ ಸಿ. ಎನ್ ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1121 (1163) |
| ಉತ್ತರಿಸಬೇಕಾದ ದಿನಾಂಕ | 18.03.2025 |
| ಉತ್ತರಿಸಬೇಕಾದವರು | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ 50:50 ಅನುಪಾತದಡಿ ಹಂಚಿಕೆ ಮಾಡಿರುವ ನಿವೇಶನಗಳ ಸಂಖ್ಯೆ ಎಷ್ಟು; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಿಂದ ಶೇ. 50:50ರ ಅನುಪಾತದಲ್ಲಿ ವಿವಿಧ ಅಳತೆಗಳ ಒಟ್ಟು 1149 ನಿವೇಶನಗಳನ್ನು ಮಂಜೂರು ಮಾಡಲಾಗಿರುತ್ತದೆ. |
| ಆ) | 50:50 ಅನುಪಾತದಡಿ ನಿವೇಶನ ಹಂಚಿಕೆ ಮಾಡಲು ಅನುಸರಿಸಿದ ಮಾದಂಡಗಳೇನು; | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನ ಹಂಚಿಕೆಯಲ್ಲಿ ನಡೆದಿದೆ ಎನ್ನಲಾದ ಪ್ರಕರಣವು ಬೆಳಕಿಗೆ ಬಂದ ಹಿನ್ನೆಲೆಯಲ್ಲಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಹೆಚ್‌ಡಿ 87 ಪಿಸಿಇ 2024, ದಿನಾಂಕ: 14.07.2024 ರನ್ವಯ ಸದರಿ ಅಕ್ರಮದ ಬಗ್ಗೆ ವಿಚಾರಣೆ ನಡೆಸಲು ಗೌರವಾನ್ವಿತ ಮಾನ್ಯ ನಿವೃತ್ತ ನ್ಯಾಯಾಧೀಶರಾದ ಶ್ರೀ ಪಿ.ಎನ್ ದೇಸಾಯಿ ಇವರ ಅಧ್ಯಕ್ಷತೆಯಲ್ಲಿ ಏಕ ಸದಸ್ಯ ವಿಚಾರಣಾ ಆಯೋಗ ರಚಿಸಲಾಗಿದೆ. ಮಾನ್ಯ ಆಯೋಗದಲ್ಲಿ ವಿಚಾರಣಾ ಪ್ರಕ್ರಿಯೆಯು ಜಾರಿಯಲ್ಲಿದೆ. ಮಾನ್ಯ ಆಯೋಗದ ವರದಿ ಸ್ವೀಕೃತವಾದ ನಂತರ ಸದರಿ ವರದಿಯನ್ನಾಧರಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುವುದು. |
| ಇ) | ಮಾನದಂಡಗಳನುಸಾರ 50:50 ಅನುಪಾತದಡಿ ನಿವೇಶನಗಳ ಹಂಚಿಕೆ ಕ್ರಮವಾಗಿರುವುದನ್ನು ಹೊರತುಪಡಿಸಿ ಮಾನದಂಡ ಪಾಲಿಸದೆ ನಿವೇಶನಗಳನ್ನು ಹಂಚಿಕೆ ಮಾಡಿರುವ ಪ್ರಕರಣಗಳಲ್ಲಿ ತಪ್ಪುಗಳಾಗಿರುವುದು ಕಂಡುಬಂದ ಸಂದರ್ಭದಲ್ಲಿ ಕೈಗೊಳ್ಳುವ ಕ್ರಮಗಳೇನು; | |
| ಈ) | ನಿಯಮಬಾಹಿರವಾಗಿ 50:50 ಅನುಪಾತದಡಿ ನಿವೇಶನ ಹಂಚಿಕೆ ಮಾಡಿರುವ ಪ್ರಕರಣಗಳಿಂದ ಮುಡಾಗೆ ಆರ್ಥಿಕ ನಷ್ಟವೆಷ್ಟು? | |

ಸಂಖ್ಯೆ :ನಅಇ 124 ಮೈಅಪ್ರಾ 2025(ಇ)

**(ಬಿ.ಎಸ್ ಸುರೇಶ)**
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು